**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 11ನೇ ಫೆಬ್ರವರಿ ತಿಂಗಳು 2026 ರಂದು

**ಸಿಸಿ ನಂ.107/2024**

**ಫಿರ್ಯಾದುದಾರರುಃ** ಶ್ರೀ.ಅಶೋಕ, ಬಿನ್ ಕೆ.ಎಸ್.ರಾಜಪ್ಪ,
43 ವರ್ಷ, ವಾಸಃ ಕಲ್ಲಹಳ್ಳಿ ಗ್ರಾಮ,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**- ವಿರುದ್ಧ -**

**ಆರೋಪಿಃ** ಶ್ರೀ.ನಯಾಜ್ ಪಾಷ, ಬಿನ್ ಅತಾವುಲ್ಲಾ,
35 ವರ್ಷ, ವಾಸಃ ಮುಸಾಫರ್ ಖಾನೆ,
ಹಳೇ ಬ್ರಿಡ್ಜ್ ಹುಣಸೂರು ಟೌನ್,
ಮೈಸೂರು ಜಿಲ್ಲೆ.
ಕೆಲಸದ ಸ್ಥಳಃ ಶಾ ಬೊಟಿಕ್, ಬೌಸ್ ಕ್ಯಾಂಡ್ ವರ್ಕ್,
ಕರೀಗೌಡ ಕಟ್ಟಡ, 1ನೇ ಹಂತ, ಕ್ಲಬ್ ರಸ್ತೆ,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಶ್ರೀ.ಅಶೋಕ್ ರವರು ಹಲವಾರು ವರ್ಷಗಳಿಂದ ಒಬ್ಬರಿಗೊಬ್ಬರು ಪರಿಚಯಸ್ಥರಾಗಿದ್ದು, ನೀವು ಜುಲೈ - 2023 ರಂದು ಅವರಿಂದ ರೂ.2,00,000/-ಗಳನ್ನು ನಿಮ್ಮ ಕಾನೂನು ಬದ್ಧ ಅವಶ್ಯಕತೆಗಾಗಿ ಅಂದರೆ ವ್ಯಾಪಾರಕ್ಕಾಗಿ 3 ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ದಿನಾಂಕಃ 17.10.2023 ರಂದು ಪಾವತಿಯಾಗುವಂತೆ ನೀವು ಕೊಟೆಕ್ ಮಹೀಂದ್ರಾ ಬ್ಯಾಂಕ್, ಬಿಡದಿ ಶಾಖೆಯ ಚೆಕ್ ಸಂಖ್ಯೆಃ 000005 ಅನ್ನು ರೂ.2,00,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಅವರು ತಮ್ಮ ಖಾತೆ ಹೊಂದಿದ ಇಸಾಫ್ ಸ್ಮಾಲ್ಲಾ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 16.12.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದಿದಾರರು ದಿನಾಂಕಃ

28.12.2023 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯ ಮೂಲಕ ಮತ್ತು ಆರ್ಡಿನರಿ ಅಂಚೆಯ ಕಳುಹಿಸಿದ ನೋಟೀಸ್ ಕಳುಹಿಸಿದ್ದು, ಆರ್ಡಿನರಿ ಅಂಚೆಯ ಮೂಲಕ ಕಳುಹಿಸಿದ ನೋಟೀಸನ್ನು ಸ್ವೀಕರಿಸಿದ್ದು, ನೋಂದಾಯಿತ ಅಂಚೆಯ ಮೂಲಕ ಕಳುಹಿಸಿದ ನೋಟೀಸನ್ನು ಉದ್ದೇಶಪೂರ್ವಕವಾಗಿ ತಿರಸ್ಕರಿಸಿದ್ದು ಆದರೂ ಸಹ ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ.138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆ:1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ